ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

(30)

ಇಲಾಖೆ / ವಿಷಯ : DEPARTMENT / SUBJECT: ಪ್ರಧಾನ ಮಂತ್ರಿ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ

ದಿನಾಂಕ : DATE : 23/12/20

# ಮೋದಿಗೆ ಅಮೆರಿಕದ ಅತ್ಯುಚ್ಚ ಸೇನಾ ಪುರಸ್ಕಾರ

## ಅಧ್ಯಕ್ಷ ಡೊನಾಲ್ಡ್ ಟ್ರಂಪ್‌ರಿಂದ ಘೋಷಣೆ, ಪ್ರದಾನ



ಭಾರತ-ಅಮೆರಿಕನಡುವಣವ್ಯೂಹಾತ್ಮಕ ಸಂಬಂಧವನ್ನು ಹೊಸ ಎತ್ತರಕ್ಕೆ ಒಯ್ದ ಹಾಗೂ ಜಾಗತಿಕ ಶಕ್ತಿಯಾಗಿ ಭಾರತ ಹೊರಹೊಮ್ಮುವಂತೆ ಮಾಡಿದ ಕಾರಣಕ್ಕಾಗಿ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಅಮೆರಿಕ ತನ್ನ ಅತ್ಯುಚ್ಚ ಮಿಲಿಟರಿ ಪುರಸ್ಕಾರಗಳಲ್ಲಿ ಒಂದಾಗಿರುವ 'ಲೀಜನ್ ಆಫ್ ಮೆರಿಟ್' ಅನ್ನು ಘೋಷಣೆ ಮಾಡಿದೆ. ಕ.ಪ್ರ 23/12/20

ಈ ಪ್ರಶಸ್ತಿಗೆ ಮೋದಿ ಅವರನ್ನು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಆಯ್ಕೆ ಮಾಡಿದ್ದಾರೆ. ಜಪಾನ್ ಮಾಜಿ ಪ್ರಧಾನಿ ಶಿಂಜೋ ಅಬೆ ಹಾಗೂ ಆಸ್ಟ್ರೇಲಿಯಾ ಪ್ರಧಾನಿ ಸ್ಕಾಟ್ ಮಾರಿಸನ್ ಅವರಿಗೂ ಈ ಗೌರವವನ್ನು ಟ್ರಂಪ್ ಅವರು ಘೋಷಿಸಿದ್ದಾರೆ.

ಮೋದಿ ಪರವಾಗಿ ಅಮೆರಿಕದಲ್ಲಿನ ಭಾರತೀಯ ರಾಯಭಾರಿ ತರಣಜಿತ್ ಸಿಂಗ್ ಸಂಧು ಅವರು ಅಮೆರಿಕದ ರಾಷ್ಟ್ರೀಯ ಭದ್ರತಾ ಸಲಹೆಗಾರ ರಾಬರ್ಟ್ ಓ'ಬ್ರಿಯಾನ್ ಅವರಿಂದ ಶ್ವೇತ ಭವನದಲ್ಲಿ ಸೋಮವಾರ ಗೌರವ ಸ್ವೀಕರಿಸಿದರು. ಲೀಜನ್ ಆಫ್ ಮೆರಿಟ್ ಪುರಸ್ಕಾರವನ್ನು ವಿವಿಧ ದೇಶಗಳ ಮುಖ್ಯಸ್ಥರಿಗೆ ಮಾತ್ರ ನೀಡಲಾಗುತ್ತದೆ.

ಈ ಬಗ್ಗೆ ಪ್ರತಿಕ್ರಿಯಿಸಿರುವ ಪ್ರಧಾನಿ ಮೋದಿ ಅಮೆರಿಕದ ಅತ್ಯುನ್ನತ ಲೀಜನ್ ಆಫ್ ಮೆರಿಟ್ ಪುರಸ್ಕಾರಕ್ಕೆ ನನ್ನನ್ನು ಆಯ್ಕೆಮಾಡಿದ್ದಕ್ಕೆ ಆಭಾರಿಯಾಗಿದ್ದೇನೆ. ಭಾರತ-ಅಮೆರಿಕ ಮಧ್ಯೆ ವ್ಯೂಹಾತ್ಮಕ ಸಂಬಂಧವನ್ನು ಹೊಸ ಎತ್ತರಕ್ಕೆ ಕೊಂಡೊಯ್ದ ಭಾರತೀಯ ಜನರ ಯತ್ನವನ್ನು ಈ ಪ್ರಶಸ್ತಿ ಗುರುತಿಸುತ್ತದೆ ಎಂದು ಹೇಳಿದ್ದಾರೆ.